# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 755 (876) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ |
| ಉತ್ತರಿಸುವ ದಿನಾಂಕ | : | 24-08-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ).</td><td>ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಒಟ್ಟು ವಸತಿ ನಿಲಯಗಳ ಸಂಖ್ಯೆ ಎಷ್ಟು; ಅವುಗಳಲ್ಲಿ 2025-26 ರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ; (ವಿವರ ನೀಡುವುದು)</td><td>ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1213 ಮೆಟ್ರಿಕ್ ಪೂರ್ವ ಮತ್ತು 731 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಸೇರಿದಂತೆ ಒಟ್ಟಾರೆ 1,944 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಾವಕಾಶ ಕಲ್ಪಿಸಲಾದ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ವಿವರ</th><th>ನಿಲಯಗಳ ಸಂಖ್ಯೆ</th><th>ವಿದ್ಯಾರ್ಥಿಗಳ ಸಂಖ್ಯೆ</th></tr>
<tr><td>01</td><td>ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು</td><td>1213</td><td>93750</td></tr>
<tr><td>02</td><td>ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು</td><td>731</td><td>118737</td></tr>
<tr><td></td><td>ಒಟ್ಟು :</td><td>1944</td><td>212487</td></tr>
</table></td></tr>
<tr><td>ಆ).</td><td>ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡವನ್ನು ಹೊಂದಿವೆ; ಎಷ್ಟು ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿವೆ;</td><td>ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ 1944 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳ ಪೈಕಿ, 1711 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ 233 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.</td></tr>
<tr><td>ಇ).</td><td>ದಕ್ಷಿಣ ಕನ್ನಡ ಜಿಲ್ಲೆಗೆ ವಿವಿಧ ಜಿಲ್ಲೆಗಳಿಂದ ಆಗಮಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದ್ದು, ಹೆಚ್ಚುವರಿ ವಸತಿ ನಿಲಯಗಳ ಬೇಡಿಕೆ ಇದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)</td><td>2026-27ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ-182 ರನ್ವಯ 150 ಸಂಖ್ಯಾಬಲದ 62 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶವಾಗಿರುತ್ತದೆ. ಅದರಂತೆ ಜಿಲ್ಲೆಗಳಿಂದ ಬೇಡಿಕೆಯನ್ನು ಪಡೆದು ಹೆಚ್ಚಿನ ಬೇಡಿಕೆ ಇರುವ ಜಿಲ್ಲೆಗಳಿಗೆ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು.</td></tr>
</table>

---2

| | | |
|---|---|---|
| ಈ). | ಇಲಾಖೆಯಿಂದ ನಡೆಸುತ್ತಿರುವ ವಸತಿ ನಿಲಯಗಳಲ್ಲಿ ವಿವಿಧ ಹಂತಗಳ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು? (ವಿವರ ನೀಡುವುದು) | ಬಂದಿದೆ.<br><br>ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಈ ಕೆಳಕಂಡಂತೆ ಕ್ರಮವಹಿಸಲಾಗಿರುತ್ತದೆ.<br><br>ವಾರ್ಡನ್ ಹುದ್ದೆಗೆ ಸಂಬಂಧಿಸಿದಂತೆ ಉಳಿಕೆ ಮೂಲ ವೃಂದದ 325 ಹಾಗೂ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ 25 ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ದಿನಾಂಕ:30.06.2026 ರಂದು ಆಯುಕ್ತರ ಕಛೇರಿಯಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br><br>ಮುಂದುವರೆದು, ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಗ್ರೂಪ್-ಡಿ ಹುದ್ದೆಗಳಿಗೆ ಎದುರಾಗಿ ಹೊರಸಂಪನ್ಮೂಲ ಏಜೆನ್ಸಿ ಮುಖೇನ ಸಿಬ್ಬಂದಿಗಳ ಸೇವೆಯನ್ನು ಪಡೆದು ವಿದ್ಯಾರ್ಥಿ ನಿಲಯಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. |

**ಸಕಇ 790 ಪಕವಿ 2026**

**(ಕೆ.ಹೆಚ್.ಮುನಿಯಪ್ಪ)**
**ಸಮಾಜ ಕಲ್ಯಾಣ ಸಚಿವರು**